## ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ,
## ಬ್ಯಾಟರಾಯನಪುರ ಉಪ ವಿಭಾಗ, ವಾರ್ಡ್ ನಂ. 05(ಜಕ್ಕೂರು)
## ವಾರ್ಡ್‌ಸಮಿತಿ ಸಭೆ, ದಿನಾಂಕ: 06.02.2021 ರ
## ಸಭಾ ನಡುವಳಿ

ದಿನಾಂಕ: 06.02.2021 ರಂದು ಬೆಳ್ಳಿಗೆ 11.30 ಗಂಟೆಗೆ ವಾರ್ಡ್ ನಂ.05 ಜಕ್ಕೂರು ವ್ಯಾಪ್ತಿಯಲ್ಲಿ ವಾರ್ಡ್ ಸಮಿತಿಯ ಸಭೆಯನ್ನು ನೋಡಲ್ ಅಧಿಕಾರಿಯವರ ಅಧ್ಯಕ್ಷತೆಯಲ್ಲಿ ಸಹಯಕ ಕಾರ್ಯಪಾಲಕ ಅಭಿಯಂತರರು, ಬ್ಯಾಟರಾಯನಮರ ಉಪ ವಿಭಾಗ ಕಛೇರಿ, ದಾಸರಹಳ್ಳಿ, ಇಲ್ಲಿ ನೆಡೆದ ವಾರ್ಡ್ ಸಮಿತಿಯ ಸಭೆಯ ನಡುವಳಿಗಳು

| ಕ್ರ.ಸಂ | ಸಭೆಗೆ ಹಾಜರಾಗಿರುವ ಅಧಿಕಾರಿಗಳು | ಹುದ್ದೆ |
|---|---|---|
| 1 | ಶ್ರೀ ಬಿ.ಜಿ ದೇವರಾಜ್ | ನೋಡಲ್ ಅಧಿಕಾರಿ, ವಾರ್ಡ್ ನಂ. 05(ಜಕ್ಕೂರು) ಹಾಗೂ ಸಹಾಯಕ ಕಾರ್ಯಪಾಲಕ ಅಭಿಯಂತರರು (ಯೋಜನಾ ವಿಭಾಗ) |
| 2 | ವೈ.ಎನ್ ಮಹಂತೇಶ್ ಕುಮಾರ್ | ಕಾರ್ಯದರ್ಶಿಗಳು, ವಾರ್ಡ್ ಕಮಿಟಿ ವಾರ್ಡ್ ನಂ. 06 , ಮತ್ತು ಸಹಾಯಕ ಅಭಿಯಂತರರು |
| 3 | ಡಾ॥ ಮುರಳಿಧರ್ ಬಿ | ವೈದ್ಯಾಧಿಕಾರಿಗಳು, ಪ್ರಥಾಮಿಕ ಆರೋಗ್ಯ ಕೇಂದ್ರ ಅಗ್ರಹಾರ ಬಡಾವಣೆ |
| 4 | ಶ್ರೀ ಶ್ರೀನಾಥ್ | ಚಿಕ್ಕಜಾಲ ಪೋಲಿಸ್ ಠಾಣೆ |
| 5 | ಶ್ರೀ ಶ್ರೀನಿವಾಸ್ | ಬಿಬಿಎಂಪಿ, ವಿದ್ಯುತ್ ವಿಭಾಗ |
| 6 | ಶ್ರೀ ಜಿ. ವೆಂಕಟೇಶ್ | ಹಿರಿಯ ಆರೋಗ್ಯ ಪರಿವೀಕ್ಷಕರು, ವಾರ್ಡ್ ನಂ. 05 |
| 7 | ಶ್ರೀ ಅಶ್ವಥ್ | ಕಿರಿಯ ಆರೋಗ್ಯ ಪರಿವೀಕ್ಷಕರು ವಾರ್ಡ್ ನಂ. 05 |
| 8 | ಬಿ. ನಾಗೇಂದ್ರಪ್ಪ | ಎಸ್.ಡಿ.ಎ, ಕಂದಾಯ ಶಾಖೆ, ಥಣಿಸಂದ್ರ |
| 9 | ಶ್ರೀನಿವಾಸಮೂರ್ತಿ ಎಂ | 'ಬಿಬಿಎಂಪಿ ವಿದ್ಯುತ್ ವಿಭಾಗ |

ಶ್ರೀ ವೈ.ಎನ್ ಮಹಂತೇಶ್ ಕುಮಾರ್ ಸಹಾಯಕ ಅಭಿಯಂತರರು ಹಾಗೂ ವಾರ್ಡ್ ಕಮಿಟಿ ಕಾರ್ಯದರ್ಶಿ ರವರು ಸಭೆಯನ್ನುದ್ದೇಶಿಸಿ ಮಾತನಾಡುತ್ತಾ, ಸಭೆಗೆ ಹಾಜರಾಗಿದ್ದ ಅಧಿಕಾರಿಗಳು, ಹಾಗೂ ಸಾರ್ವಜನಿಕರಿಗೆ ಸ್ವಾಗತಿಸುವ ಮೂಲಕ ಸಭೆಯನ್ನು ಪ್ರಾರಂಭಿಸುತ್ತಾ ಈ ಸಭೆಯಲ್ಲಿ ಚರ್ಚಿಸಬೇಕಾದ ಪ್ರಮುಖ ವಿಷಯಗಳ ಬಗ್ಗೆ ವಿವರಿಸುತ್ತಾ ಸದರಿ ಸಭೆಯ ಅಜೆಂಡ ವಿಷಯಗಳ ಬಗ್ಗೆ ತಿಳಿಸಿದರು.



Scanned by CamScanner

1. **ಕೋವಿಡ್–19ರ ಸಂಬಂಧ ಸೋಂಕು ಹರಡುವುದನ್ನು ತಡೆಗಟ್ಟುವ ಸಂಬಂಧ ತೆಗೆದುಕೊಳ್ಳಬೇಕಾದ ಮುಜಾಗೃತ ಕ್ರಮಗಳ ಬಗ್ಗೆ:** ವಾರ್ಡ್ ನಂ. 05ರ ಕಿರಿಯ ಆರೋಗ್ಯ ಪರಿವೀಕ್ಷಕರಾದ ಶ್ರೀ ಅಶ್ವಥ್ ರವರು ಮಾತನಾಡಿ ವಾರ್ಡ್ ವ್ಯಾಪ್ತಿಯಲ್ಲಿ ಕರೊನಾ ಲಸಿಕೆ ನೀಡುವ ಅಭಿಯಾನ ಪ್ರಾರಂಭವಾಗುತ್ತಿದ್ದು, ಮೊದಲಿಗೆ ಕರೊನಾ ವಾರಿಯರ್ಸ್‌ಗಳಾದ ಆರೋಗ್ಯ ಸಿಂಬ್ಬಂದಿಯವರಿಗೆ ನೀಡಿ ನಂತರ ಪಾಲಿಕೆಯ ಎಲ್ಲಾ ಅಧಿಕಾರಿ ಸಿಬ್ಬಂಧಿಗೆ ನೀಡಲು ಉದ್ದೇಶಿಸಿದ್ದು, ಎಲ್ಲಾ ಅಧಿಕಾರಿ ಸಿಬ್ಬಂದಿಗಳ ಮಾಹಿತಿಯನ್ನು ಸಂಗ್ರಹಿಸಲು ಸಭೆಗೆ ತಿಳಿಸಲಾಯಿತು.
2. ಬೃಹತ್ ರಸ್ತೆಗಳ ವಿಭಾಗದ ರಸ್ತೆಗಳ ಬದಿಗಳಲ್ಲಿ ಹಾಗೂ ಚರಂಡಿಗಳಲ್ಲಿ ಹೂಳನ್ನು ತೆಗೆದು ಹೊರ ಸಾಗಿಸಲು ಸಾರ್ವಜನಿಕರಿಂದ ದೂರು ಬಂಧಿರುವುದಾಗಿ ಸ.ಅ–05 ರವರ ತಿಳಿಸಿದರು ಈ ಬಗ್ಗೆ ಮಾನ್ಯ ಅಧ್ಯಕ್ಷರು ಮಾತನಾಡಿ ಬಾಗಲೂರು ಮುಖ್ಯರಸ್ತೆ – ಬಾಗಲೂರು ಕ್ರಾಸ್, ಎನ್.ಹೆಚ್–7 ರಿಂದ ಕಂಟ್ರಿ ಕ್ಲಬ್ ವರೆಗೆ ಪುಟ್ ಒತ್ತುವರಿ ತೆರವುಗೊಳಿಸಿ ಚರಂಡಿಗಳನ್ನು ತುಂಬಿರುವ ಹೂಳನ್ನು ತೆಗೆದು ಹೊರಸಾಗಿಸಲು ಸಂಬಂಧಪಟ್ಟ ಅಭಿಯಂತರರಿಗೆ ಈ ಬಗ್ಗೆ ಬೃಹತ್ ರಸ್ತೆಗಳ ವಿಭಾಗದ ಅಧಿಕಾರಿಯವರಿಗೆ ವಿಷಯ ತಿಳಿಹಿಸುವಂತೆ ಸೂಚಿಸಿದರು.
3. ಪ್ರಣವ್‌ರಾವ್ ಕೋಗಿಲು ರವರು ಮಾತನಾಡಿ ಬೆಸ್ಕಾಂ ಇಲಾಖೆಯವರು ವಿದ್ಯುತ್ ಲೈನ್ ಅಳವಡಿಸಲು ರಸ್ತೆ ಅಗೆತ ಮಾಡಿ ಸರಿಯಾಗಿ ಫಿಲ್ ಮಾಡದೇ ಇರುವುದರಿಂದ ವಿದ್ಯುತ್ ಖಡಿತಗೊಂಡಿರುತ್ತದೆ. ಈ ಬಗ್ಗೆ ಕ್ರಮ ಕೈಗೊಳ್ಳುವಂತೆ ಕೋರಿದರು ಈ ಬಗ್ಗೆ ಕೂಡಲೇ ಕ್ರಮ ವಹಿಸುವಂತೆ ಬೆಸ್ಕಾಂ ಅಧಿಕಾರಿಗಳಿಗೆ ಸೂಚಿಸಿದರು.
4. ಜಕ್ಕೂರು ಮತ್ತು ಟೆಲಿಕಾಂ ಬಡಾವಣೆಗಳಲ್ಲಿ ಬಿಡಬ್ಲ್ಯೂ.ಎಸ್.ಎಸ್.ಬಿ ಇಲಾಖೆಯವರು ಸ್ಯಾನಿಟರಿ ಛೇಂಬರ್ ತುಂಬಿ ಹರಿಯುತ್ತಿರುವುದರೀಂದ ಸಾರ್ವಜನಿಕರಿಗೆ ತುಂಬ ತೊಂದರೆಯಾಗುತ್ತಿರುತ್ತದೆಂದು ದೂರು ಬಂದಿರುತ್ತದೆ ಈ ಬಗ್ಗೆ ಕ್ರಮ ಕೈಗೊಳ್ಳುವಂತೆ ಸ.ಅ ರವರು ಕೋರಿದರು ಈ ಬಗ್ಗೆ ಕೂಡಲೇ ಕ್ರಮ ವಹಿಸುವಂತೆ ಬಿ.ಡಬ್ಲ್ಯೂ.ಎಸ್.ಎಸ್.ಬಿ ಇಲಾಖೆಯ ಅಧಿಕಾರಿಗಳಿಗೆ ಸೂಚಿಸಿದರು.
5. ಒಣ ಕಸ ವಿಲೇವಾರಿಗಾಗಿ ಹೆಚ್ಚುವರಿ ಆಟೋ ಟಿಪ್ಪರ್‌ಗಳನ್ನು ಒದಗಿಸಲು ಆರೋಗ್ಯ ಪರಿವೀಕ್ಷಕರು ಮನವಿ ಮಾಡಿದರು ಈ ಬಗ್ಗೆ ಅಧ್ಯಕ್ಷರು ಸಂಬಂಧಪಟ್ಟ ಘನತ್ಯಾಜ್ಯ ಸ.ಕಾ.ಅ ರವರಿಗೆ ಮಾತನಾಡಿ ಕೂಡಲೇ ಕ್ರಮ ವಹಿಸುವಂತೆ ಸೂಚಿಸಿದರು.
6. ವಾರ್ಡ್ ವ್ಯಾಪ್ತಿಯಲ್ಲಿ ಒಂಟಿ ಮನೆ ನಿರ್ಮಾಣಕ್ಕಾಗಿ 22.75% ಹಾಗೂ ಬಿ.ಸಿ.ಎಂ ಯೋಜನೆಯಡಿಯಲ್ಲಿ ಅರ್ಜಿಗಳು ಬಂದಿದ್ದು, ಇದರ ಬಗ್ಗೆ ಮುಂದಿನ ಸೂಕ್ತ ಕ್ರಮ ಹಾಗೂ ಅನುದಾನದ ಬಗ್ಗೆ ಕ್ರಮ ವಹಿಸಲು ಸ.ಅ ರವರಿಗೆ ಸೂಚಿಸದರು
7. ವಾರ್ಡ್ ವ್ಯಾಪ್ತಿಯ ಅಪಾರ್ಟ್‌ಮೆಂಟ್‌ಗಳಲ್ಲಿ 20 ಫ್ಲಾಟ್‌ಗಳಿಗಿಂತ ಹೆಚ್ಚಿನ ಮನೆಗಳಿದ್ದಲ್ಲಿ ಸದರಿ ಮನೆಗಳಲ್ಲಿ ಉತ್ಪತ್ತಿಯಾಗುವ ಹಸಿ ಮತ್ತು ಒಣ ಕಸವನ್ನು ತಮ್ಮ ಸ್ವಂತ ಖರ್ಚಿನಲ್ಲಿಯೇ ಗೊಬ್ಬರ ಮಾಡಿಕೊಳ್ಳತಕ್ಕದ್ದು



Scanned by CamScanner

ಅಥವ ಸಂಬಂಧಪಟ್ಟವರಿಂದ ಒಡಂಬಡಿಕೆ ಮಾಡಿಕೊಂಡು ಕಸ ವಿಲೇವಾರಿ ಮಾಡಿಕೊಳ್ಳಲು ಸಾರ್ವಜನಿಕರಿಗೆ ಅರಿವು ಮೂಡಿಸಲಾಗಿರುತ್ತದೆ ಎಂದು ಸಭೆಗೆ ತಿಳಿಸಿದರು.

ಕೊನೆಯದಾಗಿ ಮಾನ್ಯ ನೋಡೆಲ್ ಅಧಿಕಾರಿಗಳು, ವಾರ್ಡ್ ಸಮಿತಿ ರವರು ಮಾತನಾಡಿ ಈವರೆವಿಗೂ ಸಭೆಯಲ್ಲಿ ಚರ್ಚಿಸಿರುವ ಎಲ್ಲಾ ವಿಷಯಗಳನ್ನು ಗಂಬೀರವಾಗಿ ಪರಿಗಣಿಸಿ ಸಂಬಂಧಪಟ್ಟ ಎಲ್ಲಾ ಇಲಾಖೆಯ ಅಧಿಕಾರಿಗಳು ಕ್ರಮ ವಹಿಸುವಂಥೆ ಸೂಚಿಸಿದರು ಹಾಗೂ ಕೋವಿಡ್-19ರ ಸಂಬಂಧ ಮೇಲಾಧಿಕಾರಿಗಳಿಂದ ಬರುವ ಸೂಚನೆ ಮತ್ತು ಆದೇಶಗಳನ್ನು ನಿಯಮಾಸುಸಾರ ಪಾಲಿಸುವಂಥೆ ಹಾಗೂ ಕಾರ್ಯರೂಪಕ್ಕೆ ತರಲು ಕಾರ್ಯೋನ್ಮುಖರಾಗುವಂತೆ ಸೂಚಿಸುತ್ತಾ ವಂದನಾರ್ಪಣೆಯೊಂದಿಗೆ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

ಸದಸ್ಯ ಕಾರ್ಯದರ್ಶಿ
ಹಾಗೂ ಸಹಾಯಕ ಅಭಿಯಂತರರು
ವಾರ್ಡ್‌ಸಮಿತಿ, ವಾರ್ಡ್ ನಂ. 05(ಜಕ್ಕೂರು)

ನೋಡಲ್ ಅಧಿಕಾರಿಗಳು,
ವಾರ್ಡ್ ಸಮಿತಿ, ವಾರ್ಡ್ ನಂ. 05, (ಜಕ್ಕೂರು)

ಪ್ರತಿಯನ್ನು,

1. ಕೌನ್ಸಿಲ್ ಕಾರ್ಯದರ್ಶಿ, ಬಿಬಿಎಂಪಿ ಕೇಂದ್ರಕಛೇರಿ, ರವರ ಅವಗಾಹನೆಗಾಗಿ ಸಲ್ಲಿಸಿದೆ.
2. ಜಂಟಿಆಯುಕ್ತರು, ಯಲಹಂಕ ವಲಯರವರಿಗೆ ಅವಗಾಹನೆಗೆ ಸಲ್ಲಿಸಿದೆ.
3. ಮುಖ್ಯಅಭಿಯಂತರರು, ಯಲಹಂಕ ವಲಯರವರಿಗೆ ಅವಗಾಹನೆಗೆ ಸಲ್ಲಿಸಿದೆ.
4. ಕಂದಾಯ ಅಧಿಕಾರಿಗಳು (ಯಲಹಂಕ) ಬೆಂಗಳೂರು ರವರ ಅವಗಾಹನೆಗೆ ಸಲ್ಲಿಸಿದೆ.
5. ಕಾರ್ಯಪಾಲಕಅಭಿಯಂತರರು, ಬ್ಯಾಟರಾಯನಪುರ ವಿಭಾಗರವರಿಗೆ ಸಲ್ಲಸಿದೆ
6. ಕಛೇರಿಕಡತಕ್ಕೆ.



Scanned by CamScanner